ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು

ಸಂಖ್ಯೆ:ಜಿಎಲ್13/92/2022–23

ದಿನಾಂಕ: 17–11–2025

## ಸುತ್ತೋಲೆ

ವಿಷಯ: **"ರಾಷ್ಟ್ರೀಯ ಐಕ್ಯತಾ ಸಪ್ತಾಹ"**ವನ್ನು ಆಚರಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ(ರಾಜಕೀಯ) ಇವರ ಪತ್ರದ ಸಂಖ್ಯೆ:ಸಿಆಸುಇ.8 ಪಿಹೆಚ್‌ಎಲ್ 2025, ದಿನಾಂಕ.15.11.2025.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪ್ರತಿ ವರ್ಷದಂತೆ ದಿನಾಂಕ.19.11.2025ರಿಂದ ದಿನಾಂಕ.25.11.2025ರವರೆಗೆ **"ರಾಷ್ಟ್ರೀಯ ಐಕ್ಯತಾ ಸಪ್ತಾಹ"**ವನ್ನು ಆಚರಿಸಲು ರಾಜ್ಯ ಸರ್ಕಾರ ನಿರ್ಧರಿಸಿರುವ ಹಿನ್ನಲೆಯಲ್ಲಿ ರಾಷ್ಟ್ರದ ಸ್ವಾತಂತ್ರ್ಯ ಹಾಗೂ ಐಕ್ಯತೆಯನ್ನು ಬಲಪಡಿಸಲು, ದೇಶದಲ್ಲಿ ಹಿಂಸಾಚಾರ ಮತ್ತು ಕೋಮು ದ್ವೇಷವನ್ನು ತಡೆಗಟ್ಟುವುದಕ್ಕಾಗಿ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ತಮ್ಮ ತಮ್ಮ ವಿಭಾಗಗಳಲ್ಲಿ ಏರ್ಪಡಿಸಿಕೊಂಡು ಆಚರಿಸಲು ಕೋರಿದೆ. ಮುಂದುವರೆದು, ದಿನಾಂಕ.19.11.2025ರಂದು ಈ ಪತ್ರದೊಂದಿಗೆ ಲಗತ್ತಿಸಿರುವ **"ರಾಷ್ಟ್ರೀಯ ಐಕ್ಯತಾ" ಪ್ರಮಾಣ ವಚನವನ್ನು** ಸ್ವೀಕರಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ.

17/11/2025
ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

ಗೆ,

1. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ಸಂಯೋಜನಾಧಿಕಾರಿಗಳು ಮತ್ತು ಪ್ರಾಧ್ಯಾಪಕರು.
2. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಕುಲಸಚಿವರು(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
7. ಸಂಯೋಜಕರು, ಐ.ಡಿ.ಸಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು–ಇವರಿಗೆ ಸದರಿ **ಸುತ್ತೋಲೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.**
8. ಎಲ್ಲಾ ಉಪ ಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಮಾನ್ಯ ಕುಲಪತಿಯವರ/ಕುಲಸಚಿವರು/ಕುಲಸಚಿವರು(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈ.ವಿ.ವಿ., ಮೈಸೂರು.
10. ಕಛೇರಿ ಪ್ರತಿ.

# ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನ

" ರಾಷ್ಟ್ರದ ಸ್ವಾತಂತ್ರ್ಯ ಹಾಗೂ ಐಕ್ಯತೆಯನ್ನು ಸಂರಕ್ಷಿಸಲು ಮತ್ತು ಬಲಪಡಿಸಲು ಅರ್ಪಣಾ ಮನೋಭಾವದಿಂದ ಕೆಲಸ ಮಾಡುತ್ತೇನೆಂದು ನಾನು ಶ್ರದ್ಧಾಪೂರ್ವಕವಾಗಿ ಪ್ರಮಾಣ ಮಾಡುತ್ತೇನೆ."

" ಅಲ್ಲದೆ ನಾನು ಎಂದಿಗೂ ಹಿಂಸಾಚಾರದಲ್ಲಿ ತೊಡಗುವುದಿಲ್ಲವೆಂದು ಮತ್ತು ಮತ, ಭಾಷೆ, ಪ್ರದೇಶ ಅಥವಾ ಇತರ ರಾಜಕೀಯ ಅಥವಾ ಆರ್ಥಿಕ ಕುಂದು ಕೊರತೆಗಳ ಬಗೆಗಿನ ಭಿನ್ನಾಭಿಪ್ರಾಯಗಳನ್ನು ಮತ್ತು ವಿವಾದಗಳನ್ನು ಶಾಂತಿಯುತವಾಗಿ ಹಾಗೂ ಸಂವಿಧಾನಾತ್ಮಕ ರೀತಿಯಲ್ಲಿ ಬಗೆಹರಿಸಿಕೊಳ್ಳುವ ದಿಸೆಯಲ್ಲಿ ನನ್ನ ಪ್ರಯತ್ನವನ್ನು ಮುಂದುವರೆಸುತ್ತೇನೆಂದೂ ಪ್ರಮಾಣ ಮಾಡುತ್ತೇನೆ."

**ದಿನಾಂಕ:19.11.2025 ರಿಂದ 25.11.2025 ರವರೆಗೆ ಹಮ್ಮಿಕೊಳ್ಳಬೇಕಾದ ಕಾರ್ಯಕ್ರಮ ವಿವರ**

| | |
|---|---|
| **ದಿನಾಂಕ:19.11.2025 ಬುಧವಾರ** | **ರಾಷ್ಟ್ರೀಯ ಐಕ್ಯತಾ ದಿನ**<br>ಅಹಿಂಸೆ, ಕೋಮು ಸೌಹಾರ್ದತೆ, ಜಾತ್ಯಾತೀತತೆ, ಈ ವಿಷಯಗಳ ಬಗ್ಗೆ ಸಭೆಗಳನ್ನು ಹಾಗೂ ವಿಚಾರ ಸಂಕೀರ್ಣಗಳನ್ನು ಏರ್ಪಡಿಸುವುದು. |
| **ದಿನಾಂಕ:20.11.2025 ಗುರುವಾರ** | **ಅಲ್ಪಸಂಖ್ಯಾತರ ಕಲ್ಯಾಣ ದಿನ**<br>ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ರೂಪಿಸಿರುವ 15 ಅಂಶಗಳ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಪ್ರಯತ್ನಿಸುವುದು ಮತ್ತು ಕೋಮು ಗಲಭೆ ಪೀಡಿತ ಪ್ರದೇಶಗಳಲ್ಲಿ ಭ್ರಾತೃತ್ವ ಭಾವನೆ ಬೆಳೆಸುವಂತೆ ಮೆರವಣಿಗೆಗಳನ್ನು ಏರ್ಪಡಿಸುವುದು. |
| **ದಿನಾಂಕ:21.11.2025 ಶುಕ್ರವಾರ** | **ಭಾಷಾ ಸೌಹಾರ್ದತಾ ದಿನ**<br>ಭಾರತದ ಇತರ ಪ್ರದೇಶಗಳ ಭಾಷಾ ಪರಂಪರೆಯನ್ನು ಮತ್ತೊಂದು ಪ್ರದೇಶದ ಜನತೆಗೆ ತಿಳಿ ಹೇಳುವ ಸಲುವಾಗಿ ವಿಶೇಷ ಸಾಹಿತ್ಯಿಕ ಸಮಾರಂಭ ಮತ್ತು ಕವಿ ಸಮ್ಮೇಳನಗಳನ್ನು ಏರ್ಪಡಿಸುವುದು. |
| **ದಿನಾಂಕ:22.11.2025 ಶನಿವಾರ** | **ದುರ್ಬಲ ವರ್ಗಗಳ ದಿನ**<br>ಭೂಹೀನ ಕೃಷಿ ಕಾರ್ಮಿಕರಿಗೆ ಹೆಚ್ಚುವರಿ ಜಮೀನು ಮಂಜೂರಾತಿ ಕಾರ್ಯಕ್ರಮ ಸೇರಿದಂತೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಮತ್ತು ದುರ್ಬಲ ವರ್ಗಗಳ ಅಭಿವೃದ್ಧಿಗೆ ಸರ್ಕಾರ ಹಮ್ಮಿಕೊಂಡಿರುವ ವಿವಿಧ ಕಾರ್ಯಕ್ರಮಗಳನ್ನು ಎತ್ತಿ ತೋರಿಸುವಂತೆ ಸಭೆ ಮತ್ತು ಮೆರವಣಿಗೆಗಳನ್ನು ಏರ್ಪಡಿಸುವುದು. |
| **ದಿನಾಂಕ:23.11.2025 ಭಾನುವಾರ** | **ಸಾಂಸ್ಕೃತಿಕ ಏಕತಾ ದಿನ**<br>ಭಾರತೀಯ ಪರಂಪರೆಯಾದ ವಿವಿಧತೆಯಲ್ಲಿ ಏಕತೆಯನ್ನು ಪ್ರತಿಬಿಂಬಿಸುವಂತಹ ಸಂಸ್ಕೃತಿ ಮತ್ತು ಐಕ್ಯತೆಯನ್ನು ಸಂರಕ್ಷಿಸುವಂತಹ ಕಾರ್ಯಕ್ರಮಗಳನ್ನು ಏರ್ಪಡಿಸುವುದು. |
| **ದಿನಾಂಕ:24.11.2025 ಸೋಮವಾರ** | **ಮಹಿಳಾ ದಿನ**<br>ಭಾರತೀಯ ಸಮಾಜದಲ್ಲಿ ಮಹಿಳೆಯರ ಪ್ರಾಮುಖ್ಯತೆ ರಾಷ್ಟ್ರ ನಿರ್ಮಾಣ ಹಾಗೂ ಪ್ರಗತಿಯಲ್ಲಿ ಅವರ ಪಾತ್ರವನ್ನು ಎತ್ತಿ ತೋರಿಸುವಂತಹ ಕಾರ್ಯಕ್ರಮಗಳನ್ನು ಏರ್ಪಡಿಸುವುದು. |
| **ದಿನಾಂಕ:25.11.2025 ಮಂಗಳವಾರ** | **ಪರಿಸರ ರಕ್ಷಣಾ ದಿನ**<br>ಜನ ಸಾಮಾನ್ಯರಿಗೆ ಪರಿಸರದ ಬಗ್ಗೆ ಹಾಗೂ ಅದನ್ನು ಉಳಿಸಿ ಬೆಳೆಸಲು ತಿಳುವಳಿಕೆ ಹೇಳುವ ಸಭೆ ಸಮಾರಂಭಗಳನ್ನು ಏರ್ಪಡಿಸುವುದು. |